ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 20–10–2018**

**ಪತ್ರಿಕಾ ಆಮಂತ್ರಣ**

1. **ಪೊಲೀಸ್ ಸಂಸ್ಮರಣಾ ದಿನಾಚರಣೆ:**

**ಮುಖ್ಯ ಅತಿಥಿ:**

ಹೆಚ್. ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಅಧ್ಯಕ್ಷತೆ:**

ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ದಿನಾಂಕ: 21–10–2018, ಭಾನುವಾರ ಸಮಯ: ಬೆಳಿಗ್ಗೆ : 8.00 ಗಂಟೆಗೆ
ಸ್ಥಳ: ಕೋರಮಂಗಲದ ಕೆ.ಎಸ್.ಆರ್.ಪಿ. ಕವಾಯತು ಮೈದಾನ, ಬೆಂಗಳೂರು.

**ಸೂಚನೆ:** ಪೊಲೀಸ್ ಸಂಸ್ಮರಣ ದಿನಾಚರಣೆಯ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ಅಂದು ಬೆಳಿಗ್ಗೆ 7.15 ಗಂಟೆಗೆ ಪೊಲೀಸ್ ಆಯುಕ್ತರ ಕಚೇರಿ ಹಾಗೂ ಪೊಲೀಸ್ ಪ್ರಧಾನ ಕಚೇರಿಯಿಂದ ವಾಹನ ವ್ಯವಸ್ಥೆಯನ್ನು ಮಾಡಲಾಗಿದೆ. ಸಂಪರ್ಕ: ಮೊಬೈಲ್ ಸಂಖ್ಯೆ: 94808 00074 ಹಾಗೂ 94808 00728

2. **ಪೊಲೀಸ್ ಹುತಾತ್ಮರ ಸ್ಮಾರಕದ ಉದ್ಘಾಟನೆ :**

ಉದ್ಘಾಟನೆ:

ಡಾ ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ದಿನಾಂಕ: 21–10–2018, ಭಾನುವಾರ ಸಮಯ: ಬೆಳಿಗ್ಗೆ : 10.30 ಗಂಟೆಗೆ

ಸ್ಥಳ: ಪೊಲೀಸ್ ಸ್ಮಾರಕ ಉದ್ಯಾನ, ಪೊಲೀಸ್ ಕಾರ್ನರ್, ಸಂಖ್ಯೆ. 1, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:

**ಪತ್ರಿಕಾ ಪ್ರಕಟಣೆ**

## ಅಕ್ಟೋಬರ್ 21 ರಂದು ಪೊಲೀಸ್ ಸಂಸ್ಮರಣಾ ದಿನಾಚರಣೆ

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ) :

ಮುಖ್ಯಮಂತ್ರಿ ಹೆಚ್. ಡಿ. ಕುಮಾರಸ್ವಾಮಿ ಅವರು ಅಕೋಬರ್ 21 ರಂದು ಬೆಳಿಗೆ 8-00 ಗಂಟೆಗೆ ನಗರದ ಕೋರಮಂಗಲದ ಮೂರನೇ ಪಡೆಯ ಕೆ.ಎಸ್.ಆರ್.ಪಿ. ಆವರಣದಲ್ಲಿ ಪೊಲೀಸ್ ಸಂಸ್ಮರಣಾ ದಿನಾಚರಣೆಯ ಸಮಾರಂಭಕ್ಕೆ ಚಾಲನೆ ನೀಡಲಿದ್ದಾರೆ.

ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಅಧ್ಯಕ್ಷತೆ ವಹಿಸಲಿರುವ ಈ ಸಮಾರಂಭದಲ್ಲಿ ಪೊಲೀಸ್ ಇಲಾಖೆಯ ಉನ್ನತ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

ಅದೇ ದಿನ ಬೆಳಿಗ್ಗೆ 10-00 ಗಂಟೆಗೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ನೃಪತುಂಗಾ ರಸ್ತೆಯಲ್ಲಿರುವ ಪೊಲೀಸ್ ಹುತಾತ್ಮರ ನವೀಕೃತ ಸ್ಮಾರಕದ ಉದ್ಘಾಟನೆ ನೆರವೇರಿಸಲಿದ್ದಾರೆ.

************

ಜಿ ಪಿ ಆರ್

ಸಂಖ್ಯೆ:

**ಪತ್ರಿಕಾ ಪ್ರಕಟಣೆ**

## ಅಕ್ಟೋಬರ್ 24 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ) :

ಮುಖ್ಯಮಂತ್ರಿ ಹೆಚ್. ಡಿ. ಕುಮಾರಸ್ವಾಮಿ ಅವರು ಅಕ್ಟೋಬರ್ 24 ರಂದು ಬೆಳಿಗ್ಗೆ 11-00 ಗಂಟೆಗೆ ವಿಧಾನಸೌಧದ ಔತಣ ಸಭಾಂಗಣದಲ್ಲಿ ರಾಮಾಯಣದ ಕರ್ತೃ ಮಹರ್ಷಿ ಶ್ರೀ ವಾಲ್ಮೀಕಿ ಜಯಂತಿ ಸಮಾರಂಭವನ್ನು ಉದ್ಘಾಟಿಸಿ, ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕ ಆರ್. ರೋಷನ್ ಬೇಗ್ ಅವರು ಅಧ್ಯಕ್ಷತೆ ವಹಿಸಲಿರುವ ಸಮಾರಂಭದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಸಮಾಜ ಕಲ್ಯಾಣ ಸಚಿವ ಪ್ರಿಯಾಂಕ್ ಖರ್ಗೆ ಅವರೂ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ.

************

ಜಿ ಪಿ ಆರ್

ಸಂಖ್ಯೆ:

**ಪತ್ರಿಕಾ ಪ್ರಕಟಣೆ**

## ವಿದೇಶಿ ವ್ಯಾಸಂಗ ವೇತನ : ಹಿಂದುಳಿದ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ) :

ಡಿ. ದೇವರಾಜು ಅರಸು ವಿದೇಶಿ ವ್ಯಾಸಂಗ ವೇತನಕ್ಕೆ 2018–19 ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ, ಡಾಕ್ಟರೇಟ್ ಪದವಿ ಹಾಗೂ ಸಂಶೋಧನೆ ಮಾಡ ಬಯಸುವ ಪ್ರವರ್ಗ – 1, 2(ಎ) ಹಾಗೂ 3 (ಬಿ)ಗೆ ಸೇರಿದ ಹಿಂದುಳಿದ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅರ್ಜಿಗಳನ್ನು ಆಹ್ವಾನಿಸಿದೆ.

ಹೆಚ್ಚಿನ ವಿವರಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಸೈಟ್ : www.backwardclasses.kar.nic.in ವೀಕ್ಷಿಸಬಹುದಾಗಿದೆ. ಅಲ್ಲದೆ, ಕಚೇರಿಯ ವೇಳೆಯಲ್ಲಿ ಇಲಾಖೆಯ ಸಹಾಯವಾಣಿ ಸಂಖ್ಯೆ : 80507 70004 ಮೂಲಕ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

************

ಜಿ ಪಿ ಆರ್